# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ:ಸಿ7(8)ಪ್ರಾ.ಶಿ.ಅ/ಆರ್.ಟಿ.ಇ/ಶು.ಮ.ಯೋ//140472/2015-16 ದಿನಾಂಕ: 05-01-2019

**ಅತಿ ತುರ್ತು**

: : **ಜ್ಞಾಪನ** : :

ವಿಷಯ: ಆರ್.ಟಿ.ಇ ಶುಲ್ಕ ಮರುಪಾವತಿ ಮೊತ್ತದಲ್ಲಿ ಉಳಿದಿರುವ ಮೊತ್ತವನ್ನು ಸರ್ಕಾರಕ್ಕೆ ಜಮಾ ಮಾಡುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಪತ್ರದ ಸಂಖ್ಯೆ:7(8)ಪ್ರಾ.ಶಿ.ಅ/ಆರ್.ಟಿ.ಇ/ಶು.ಮ.ಯೋ//140472/2015-16 , ದಿನಾಂಕ: 03-05-2016.

2. ಖಜಾನೆ-2 ಕಛೇರಿಯಲ್ಲಿ ದಿನಾಂಕ:03-01-2019 ರಲ್ಲಿ ಚರ್ಚಿಸಿದಂತೆ.

**********

ಮೇಲ್ಕಂಡ ವಿಷಯದನ್ವಯ ಬಿಡುಗಡೆ ಮಾಡಲಾದ ಮೊತ್ತದಲ್ಲಿ ಹೆಚ್ಚುವರಿ ಮೊತ್ತವನ್ನು ಸರ್ಕಾರಕ್ಕೆ ಜಮಾ ಮಾಡಲು ಜಮಾ ಮಾಡುವ ಲೆಕ್ಕ ಶೀರ್ಷಿಕೆಯನ್ನು ನೀಡುವಂತೆ ಕೆಲವು ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಇವರಿಂದ ಪತ್ರ ಬಂದಿರುತ್ತದೆ.

ಉಪನಿರ್ದೇಶಕರು(ಆಡಳಿತ) ಇವರ ಪತ್ರದ ಅನ್ವಯ ಲೆಕ್ಕ ಶೀರ್ಷಿಕೆ ನೀಡುವ ಬಗ್ಗೆ ಕಡತ ಮಂಡಿಸಲಾಗಿತ್ತು. ಈ ಬಗ್ಗೆ ಪತ್ರದಲ್ಲಿ ಕಡತದ ಸಮಸಂಖ್ಯೆಯ ಕಂಡಿಕೆ 202 ರಲ್ಲಿ ಮುಖ್ಯ ಲೆಕ್ಕಾಧಿಕಾರಿಗಳು, ಆಯುಕ್ತರ ಕಛೇರಿ ರವರು ನೀಡಿರುವ ಲೆಕ್ಕ ಶೀರ್ಷಿಕೆಯಂತೆ ಪ್ರಾಥಮಿಕ ಶಿಕ್ಷಣಕ್ಕೆ ಸಂಬಂದಿಸಿದಂತೆ ಲೆಕ್ಕ ಶೀರ್ಷಿಕೆ 0202 ಶಿಕ್ಷಣ, ಕ್ರೀಡೆ, ಕಲೆ ಮತ್ತು ಸಂಸ್ಕೃತಿ ಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ ನೀಡಲಾಗಿದೆ.

ಶಿಕ್ಷಣ ಹಕ್ಕು ಕಾಯಿದೆ ಸಂಬಂಧ ಹೆಚ್ಚುವರಿ ಮೊತ್ತವನ್ನು ಸರ್ಕಾರದ ಲೆಕ್ಕ ಶೀರ್ಷಿಕೆ 0202-01-101-2-03 (0202- ಶಿಕ್ಷಣ, ಕ್ರೀಡೆ ಕಲೆ ಮತ್ತು ಸಂಸ್ಕೃತಿ, 01 ಸಾಮಾನ್ಯ ಶಿಕ್ಷಣ, **101- ಪ್ರಾಥಮಿಕ ಶಿಕ್ಷಣ**, 2-ಇತರೆ ಜಮೆಗಳು, 03ರ-ಇತರೆ ಬಾಬ್ತುಗಳು) ಗೆ ಜಮಾ ಗೊಳಿಸಬಹುದಾಗಿದೆ ಎಂಬುದಾಗಿ ಅಭಿಪ್ರಾಯಿಸಿರುವಂತೆ ಸದರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಲು ಉಲ್ಲೇಖ(1) ರಂತೆ ಸೂಚಿಸಲಾಗಿತ್ತು.

ಖಜಾನೆ-2 ಇಲಾಖೆಯ ನಿರ್ದೇಶನದಂತೆ ಶಿಕ್ಷಣ ಹಕ್ಕು ಕಾಯಿದೆ ಅಡಿ ಹೆಚ್ಚುವರಿ ಮೊತ್ತವನ್ನು ಸರ್ಕಾರದ ಲೆಕ್ಕ ಶೀರ್ಷಿಕೆ **0202-01-101-2-03ರ 000-ಪ್ರಾಥಮಿಕ ಶಿಕ್ಷಣ** ಖಾತೆಗೆ ಜಮಾ ಮಾಡಲು ಸೂಚಿಸಲಾಗಿದೆ.

ಜಮಾ ಮಾಡುವ ಬಗ್ಗೆ ಉಪನಿರ್ದೇಶಕರು (ಆಡಳಿತ) ಇವರು ಸಂಬಂದಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚನೆ ನೀಡಬಹುದಾಗಿದೆ. ಅಲ್ಲದೇ ಜಮಾ ಮಾಡಿರುವ ಬಗ್ಗೆ ಅಗತ್ಯ ದಾಖಲೆಗಳೊಂದಿಗೆ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳಿಂದ ಪಡೆದ ವರದಿಯನ್ನು ಕ್ರೋಢೀಕರಿಸಿ ಆಯುಕ್ತಾಯಕ್ಕೆ ಜರೂರಾಗಿ ಸಲ್ಲಿಸಲು ಸೂಚಿಸಲಾಗಿದೆ.

(ಎಸ್.ಜಯ ಕುಮಾರ್)
ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

5/1/19

**ಗೆ:**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು (ಆಡಳಿತ) ಇವರ ಮುಖಾಂತರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

**ಪ್ರತಿಯನ್ನು:**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01 ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.